126

1887ನೇ ಇಸವಿ ಮಿ|| ಅರ್ಜೀ ನಂಬರ್ 765.

ತುಮಕೂರು ತಾಲ್ಲೂಕು ಬೇಜೂರು ಸಮ್ಮತು ಬನ್ನಿಕುಪ್ಪೆಲಿದ್ದ ಮೃತಪಟ್ಟ ರಂಗೇಗೌಡನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ರಂಗೇಗೌಡ ಮೈನರ್ ತಾಯಿ ನಂಜಮ್ಮ ಮೃತಪಟ್ಟ ಸದರೀ ರಂಗೇಗೌಡರ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಬನ್ನಿಕುಪ್ಪೆ ಸ್ಥಳದ ರಂಗೇಗೌಡ ಮೈನರ್ ತಾಯಿ ನಂಜಮ್ಮ ಡಿಟೋ ವಾಸಸ್ಥರಾಗಿ ಮೃತಪಟ್ಟ ರಂಗೇಗೌಡರ ಜಿಂದಗೀ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ರಂಗೇಗೌಡ ಮೈನರ್ ತಾಯಿ ನಂಜಮ್ಮನ ಅರ್ಜೀಯನ್ನು 1387ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 7ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಟ್ಟಿತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಂಗೇಗೌಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಸೆಪ್ಟಂಬರ್ ತಿಂಗಳು 16ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ರೈಸ್,
ಸಬ್ ಜಡ್ಜ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜೀಯವರ ಕೋರ್ಟಿನಲ್ಲಿ.

1887ನೇ ಇಸವಿ ಅರ್ಜೀ ನಂಬರ್ 484.

ಮೃತಪಟ್ಟ ಭರಮಂಣನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕರಡೀ ಅನಂತಪ್ಪನವರು ಮೃತಪಟ್ಟ ಸದರೀ ಭರಮಂಣನವರಿಗೆ ಸಹೋದರ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಸ್ಥಳದ ಸದರೀ ಕರಡೀ ಅನಂತಪ್ಪನವರು ಚನ್ನರಾಯಪಟ್ಟಣದ ತಾಲ್ಲೂಕು ಬೆಳಗೊಳದ ವಾಸಸ್ಥನಾಗಿ ಮೃತಪಟ್ಟ ಭರಮಂಣನವರ ಜಿಂದಗೀ ಬಗ್ಯಾಗಿ ಬರತಕ್ಕ 5,000 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಕರಡೀ ಅನಂತಪ್ಪನವರ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 10ರಲ್ಲು ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಭರಮಂಣನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಅರ್ಜೀ ನಂಬರ್ 499.

ಮೃತಪಟ್ಟ ದುಂಡೇಗವ್ವಡರ ಆಸ್ತೀ ವಿಷಯದಲ್ಲಿ—

ಅರ್ಜೀದಾರ 1ನೇ ನಂಜೇಗವ್ವಡ 2ನೇ ದುಂಡೇಗವ್ವಡ 3ನೇ ಮಾದೇಗವ್ವಡ 2—3ನೇ ಮೈನರ್ ಗಾರ್ಡಿಯರ್ಸ್ ತಾಯಿ ಮಾದಮ್ಮ ಮೃತಪಟ್ಟ ಸದರೀ ದುಂಡೆಗವ್ವಡಿಗೆ ಮಕ್ಕಳು ಹೆಂಡತಿ ಆಗಬೇಕೆಂಬ ಹಕ್ಕುದಾರೀ ಮೇಲೆ ಚಾಮರಾಜನಗರ ತಾಲ್ಲೂಕು ಸಂತೆಮರಹಳ್ಳಿ ಸ್ಥಳದ ಸದರೀ 1ನೇ ನಂಜೇಗವ್ವಡ ಮಾದಮ್ಮನೂ ಸಹ ಸದರೀ ವಾಸಸ್ಥನಾಗಿ ಮೃತಪಟ್ಟ ದುಂಡೇಗವ್ವಡರ ಜಿಂದಗೀ ಬಗ್ಯಾಗಿ ಬರತಕ್ಕ 900 ರೂಪಾಯಿ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜೇಗವ್ವಡ, ಮಾದಮ್ಮ ಇವರ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 14ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದುಂಡೇಗವ್ವಡರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಸೆಪ್ಟಂಬರು ತಿಂಗಳು 12ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1887ನೇ ಇಸವಿ ಅರ್ಜೀ ನಂಬರ್ 506.

ಮೃತಪಟ್ಟ ಕಂಜಗಾರ ಗುರುವಯ್ಯನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಕಪನಯ್ಯನು ಮೃತಪಟ್ಟ ಸದರೀ ಗುರುವಯ್ಯನವರಿಗೆ ದತ್ತು ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ವಳವಳ್ಳಿ ಕಸಬಾ ಸ್ಥಳದ ಸದರೀ ಕಪನಯ್ಯನು ಸದರೀ ವಾಸಸ್ಥನಾಗಿ ಮೃತಪಟ್ಟ ಗುರುವಯ್ಯನವರ ಜಿಂದಗೀ ಬಗ್ಯಾಗಿ ಬರತಕ್ಕ 800 ರೂ ಪಾಯಿ ಸಾಲವನ್ನು ವಸೂಲ್ ಮಾಡಿಕೊಳ್ಳುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಕಪನಯ್ಯನವರ ಅರ್ಜೀಯನ್ನು 1887ನೇ ಇಸವಿ ಅಕ್ಟೋಬರ್ ತಿಂಗಳು ತಾರೀಖು 21ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಗುರುವಯ್ಯನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರು ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1887ನೇ ಇಸವಿ ಸೆಪ್ಟೆಂಬರ್ ತಿಂಗಳು 19ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿಧೆ.

ಯಸ್. ಹೇಮಾಜೆರಾವ್,
ಡಿಸ್ಟ್ರಿಕ್ಟು ಜಡ್ಜ.

ಮೈಸೂರು ಡಿಸ್ಟ್ರಿಕ್ಟು ಸಬ್ ಜಡ್ಜೀಯವರ ಕೋರ್ಟಿನಲ್ಲಿ.

ದಿವಾಳೀಯಾದ ಡಿಕ್ರೀ ದೇಣೇದಾರ ನಂಜನಗೂಡು ತಾಲ್ಲೂಕು ಕಳಲೇ ಗ್ರಾಮದಲ್ಲಿರುವ ಶ್ಯಾಮಯ್ಯನ ಪಟ್ಟಾಭಿರಾಮಯ್ಯನ ವಿಷಯದಲ್ಲಿ—

ಸ್ಯ 1887ನೇ ಇಸವಿ ದಿವಾಳೀ ಕೇಸ್ ನಂಬರ್ 51.

ಹುಕ್ಕುಂ.

ಮೇಲ್ಕಂಡ ಪಟ್ಟಾಭಿರಾಮಯ್ಯನು ನಿರ್ಬಂಧದಿಂದ ಖುಲಾಸೆಯಾಗಬೇಕೆಂದು ಕೊಟ್ಟ ಅರ್ಜೀ ಅಂಶವು ಈ ಕೋರ್ಟು ರೂಬರೂ, ಅರ್ಜೀದಾರನಾದ ಪಟ್ಟಾಭಿರಾಮಯ್ಯನ ಪರವಾಗಿ ಅಡ್ವೊಕೇಟ್ ಮೆ|| ಕಂಠೀರವಾಚಾರ್ಯರನ್ನು ಮತ್ತು ಸದರೀ ಯವನ ಲೇಣೇದಾರ್ರಾದ 1ನೇ ಕೃಷ್ಣಮಾಚಾರೀ ಕಡೇ ಆಡ್ವೊಕೇಟ್ ಗೋವಿಂದರಾಯರು 2ನೇ ಕೇಷಗಿರಿರಾವ್ 3ನೇ ಪುಟ್ಟಣ್ಣ 11ನೇ ಮರಿದೇವರು 12ನೇ ಖಿದ್ದಕೆಟ್ಟ 13ನೇ ವೆಂಕಟಕೆಟ್ಟ ಇವರಿಗೂ ದರ್ಯಾಫ್ತೀ ಮಾಡಲ್ಪಟ್ಟಿತು.

ಈ ಕೆಳಗೆ ನಮೂದು ಮಾಡಲ್ಪಡುವ ಲೇಣೇದಾರ್ರು ತಮಗೆ ಈ ದರ್ಯಾಫ್ತೀ ನೋಟೀಸ್ ಜಾರೀಯಾಗಿದ್ದಾಗ್ಯೂ ಖುದ್ದಾಗಿಯಾಗಲಿ ಅಥವಾ ಲಾಯರ್ ಮೂಲಕವಾಗಿಯಾಗಲಿ ಹಾಜರಾಗುವದಕ್ಕೆ ತಪ್ಪಿಹೋದರು, ಯಾರಂದರೆ—4ನೇ ಲಿಂಗಪ್ಪ 5ನೇ ಸುಡಗಾಡಂಣ 6ನೇ ದೇವರಾಜಭಟ್ಟು 7ನೇ ಲಕ್ಷ್ಮಮ್ಮ 8ನೇ ಮೂಗಕೆಟ್ಟ 9ನೇ ತಾಂಡುಕಾಳಕೆಟ್ಟ 10ನೇ ಸುಬ್ಬಕೆಟ್ಟ.

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 20ನೇ ಅಧ್ಯಾಯದ ನಿರೂಪಣೆಗಳ ಫಲವನ್ನೆ ಸದರೀ ಪಟ್ಟಾಭಿರಾಮಯ್ಯನು ಹೊಂದುವದಕ್ಕೆ ಹಕ್ಕುದಾರನಾಗುವದರ ಮೂಲಕ ದಿವಾಳೀಯಾದವನೆಂದು ತೀರ್ಮಾನಿಸಲ್ಪಟ್ಟಿರುತ್ತದೆಯಾಗಿ ಸದರೀ ದಿವಾಳೀಯಾದವನ್ನ ನಿರ್ಬಧದಿಂದ ವಿಮೋಚನೇ ಮಾಡಿರುವದಲ್ಲದೇ ಇದಕ್ಕೆ ಲಗ್ಗತ್ತಾಗಿರುವ ಪಟ್ಟಿಯಲ್ಲಿ ಕಂಡ ಯಾವ ಸಾಲಕ್ಕೋಸ್ಕರವಾಗಿಯಾಗಲಿ ದಸ್ತಗಿರೀ ಮಾಡಲ್ಪಟ್ಟು ನಿರ್ಬಂಧಪಡುವ ಜವಾಬ್ದಾರೀಯಿಂದ ಸಹ ಅವನ್ನ ನಿಖಾಲಸ್ ಮಾಡಲಾಗಿರುತ್ತೆಯಂದು ಇದರಿಂದ ಹುಕ್ಕುಂ ಮಾಡಲ್ಪಟ್ಟಿರುತ್ತೆ.

ಸ್ಯ 1887ನೇ ಇಸವಿ ಸೆಪ್ಟೆಂಬರ್ 7ನೇ ತಾರೀಖಿನಲ್ಲಿ ಈ ಕೋರ್ಟು ಮೊಹರ್ ನಮ್ಮ ದಸ್ತಖತ್ತಿನಿಸಿ ಕೊಡಲ್ಪಟ್ಟಿತು.

ಸಾಲದಪಟ್ಟಿ.

ನಂಬರು.	ಲೇಣೇದಾರ್ರು ಅಥವಾ ದಾವಾದಾರ್ರ ಹೆಸರು ಮತ್ತು ವಿವರ ಮತ್ತು ಹಾಲೀ ತಿಳಿಯಬಂದ ಅವರುಗಳ ವಾಸಸ್ಥಳ.	ಕೊಡಬೇಕಾದ ಸಾಲದ ಹಣ.	ಯಾವಾಗಣಿಂದ ಸಾಲದ ಹಣ ಕೊಡಬೇಕಾಗಿದೆ.	ದೇಣೆಯ ಸ್ವಭಾವ ಮತ್ತು ಅದರ ಪ್ರತಿಫಲ ಮತ್ತು ಗಿರ್ವೀಯೇನಾದರೂ ಇದ್ದರೆ.	ಷರಾ.
1	ಹುಂಡಿ ಕೃಷ್ಣಮಾಚಾರಿ ..	692 0 0	..	ಡಿಕ್ರೀ ಬಾಬತು	
2	ಮೈಸೂರು ಧನಾಭಿವೃದ್ಧೀ ಬ್ಯಾಂಕ್ ಯೇಜಂಟ್ ಶೇಷಗಿರಿರಾವ್ ..	50 0 0	..	ಡಿಟೋ	
		742 0 0			